ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-181ಕುಮಾರಸ್ವಾಮಿ ಬಡಾವಣೆ, ಬೆಂಗಳೂರು

ದಿನಾಂಕ : 05.09.2022.

ಸಂ: ಸ.ಅ/ವಾ-181/ಪಿ.ಆರ್/ /2022-23

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ವಿಷಯ:-ಮಾನ್ಯಆಯುಕ್ತರು ಬಿ.ಬಿ.ಎಂ.ಪಿ ರವರಆದೇಶ ಸಂಖ್ಯೆ :ಬಿ12(58)ಪಿಆರ್/35/2020-21 ದಿನಾಕ :21-09-2020 ರವರಆದೇಶದಂತೆ ದಿನಾಂಕ :03.09.2022 ರಂದು ವಾರ್ಡ್ ಸಂಖ್ಯೆ-181ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯಆಯುಕ್ತರವರ ಸೂಚನಾ ಪತ್ರದಅನುಸಾರಆದೇಶದ ಅಂಶಗಳನ್ನು ಪಾಲಿಸಲು ವಾರ್ಡ್‌ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :03.09.2022 ರಂದು ವಾರ್ಡ್ ಸಮಿತಿ ಸಂಚಾಲಕರು ಮತ್ತು ಸಹಾಯಕಅಭಿಯಂತರರುವಾರ್ಡ್ ಸಂಖ್ಯೆ-181 ರವರಾದ ಶ್ರೀಮತಿ.ಮಮತರವರು ಪ್ರಾರಂಭದಲ್ಲಿ ಉಪಸ್ಥಿತರಿದ್ದ ನೋಡೆಲ್‌ಅಧಿಕಾರಿ ಮತ್ತು ವಾರ್ಡ್ ಸಮಿತಿಯಅಧ್ಯಕ್ಷರು ಮತ್ತು ಉಪಸ್ಥಿತರಿದ್ದ ಎಲ್ಲಾ ಅಧಿಕಾರಿಗಳು,ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಶನ್ ಹಾಗೂ ಸಾರ್ವಜನಿಕರನ್ನುಸ್ವಾಗತಕೋರಿದರು.

ಅಧ್ಯಕ್ಷರಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಇಂದಿನ ಸಭೆಯಲ್ಲಿಚರ್ಚಿಸಲಾದ ವಿಷಯಗಳು :-

1. ವಾರ್ಡ್‌ಗಳಲ್ಲಿ ಕಂಬಳಿ ಹುಳುಗಳ ಹೆಚ್ಚಾಗಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವ ಕಾರಣ ಆರೋಗ್ಯಾಧಿಕಾರಿಗಳಿಗೆ ಕಂಬಳಿ ಹುಳುಗಳಿಗೆ ಔಷಧಿ ಸಿಂಪಡಿಸಲು ಸೂಚಿಸಲಾಯಿತು.
2. ವಾರ್ಡಿನ ರಸ್ತೆ ಪಕ್ಕದಲ್ಲಿ ಡೆಬ್ರಿಸ್‌ಗಳು ಹೆಚ್ಚಾಗುತ್ತಿದ್ದು, ಅದನ್ನು ವಿಲೇವಾರಿ ಮಾಡುವಂತೆ ಘನತ್ಯಾಜ್ಯ ನಿರ್ವಹಣೆ ವಿಭಾಗದ ಅಧಿಕಾರಿಗಳಿಗೆ ಕ್ರಮ ವಹಿಸುವಂತೆ ಸೂಚಿಸಲಾಯಿತು. ಸದರಿ ವಿಭಾಗರವರು ಕೂಡಲೇಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.
3. ಕುಮಾರಸ್ವಾಮಿ ಬಡಾವಣೆ 2ನೇ ಹಂತದ 50ನೇ ಅಡಿ ರಸ್ತೆಯಲ್ಲಿ ವಿದ್ಯುತ್ ಕಂಬದ ಪಕ್ಕದ ರಸ್ತೆಯಲ್ಲಿ ಬಿದ್ದಿರುವ ಗುಂಡಿಯಿಂದ ಸದರಿ ವಿದ್ಯುತ್ ಕಂಬ ಬೀಳುವ ಸಾಧ್ಯತೆಯಿದ್ದು ಸದರಿ ರಸ್ತೆ ಗುಂಡಿಯನ್ನು ಮುಚ್ಚಲು ಹಾಗೂ ಬೆಸ್ಕಾಂ ವಿಭಾಗ ರವರಿಗೆ ವಿದ್ಯುತ್ ಕಂಬವನ್ನು ಸರಿಪಡಿಸಲು ಕೂಡಲೇ ಕ್ರಮವಹಿಸುವಂತೆ ಸೂಚಿಸಲಾಯಿತು.

ಮಾನ್ಯಆಯುಕ್ತರವರ ಸೂಚನೆಯಂತೆ ಪ್ರತಿಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿಸಭೆಯನ್ನುಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲುಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿಯಾವುದೇ ಪ್ರಸ್ತಾವನೆ ಮಾಡದಿದ್ದಕಾರಣ ನೋಡಲ್‌ಅಧಿಕಾರಿ/ಅಧ್ಯಕ್ಷರಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ 181ರ ನೋಡಲ್‌ಅಧಿಕಾರಿ.

Scanned with OKEN Scanner